86

# ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಕೆ.ವಿವೇಕಾನಂದ ಇವರು ನಿಯಮ 330ರಡಿ ಪ್ರಸ್ತಾಪಿಸಿರುವ ಸೂಚನೆಗೆ ಸರ್ಕಾರದ ಉತ್ತರ.

## ಸೂಚನೆ:

ದಿನಾಂಕ: 20-05-2023 ರಿಂದ ಇದುವರೆವಿಗೂ ಸಮಾಜ ಕಲ್ಯಾಣ ಇಲಾಖೆಯಿಂದ ರಾಜ್ಯದಲ್ಲಿ ಹೊಸದಾಗಿ ಎಷ್ಟು ಅಂಬೇಡ್ಕರ್ ಭವನಗಳ ನಿರ್ಮಾಣ ಹಾಗೂ ದುರಸ್ತಿ ಮತ್ತು ಮುಂದುವರೆದ ಕಾಮಗಾರಿಗಳಿಗೆ ಮೀಸಲಿಟ್ಟ ಹಣವೆಷ್ಟು, ಖರ್ಚು ಮಾಡಲಾದ ಹಣವೆಷ್ಟು ವಿವರಗಳನ್ನು ಒದಗಿಸುವುದು. ಮಂಡ್ಯ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಮಂಡ್ಯ ನಗರದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನಕ್ಕೆ ಮೂಲಭೂತ ಸೌಕರ್ಯ ಕಲ್ಪಿಸಿಕೊಡುವ ಕಾಮಗಾರಿಗೆ ಸಂಬಂಧಪಟ್ಟಂತೆ ಮಾನ್ಯ ಸಮಾಜ ಕಲ್ಯಾಣ ಸಚಿವರಲ್ಲಿ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಅದರಂತೆ ಮಾನ್ಯ ಸಚಿವರು ಸಮಾಜ ಕಲ್ಯಾಣ ಇಲಾಖೆಯ ಆಯುಕ್ತರಿಗೆ ಅಗತ್ಯ ಕ್ರಮ ಜರುಗಿಸಲು ಸೂಚಿಸಿರುವಂತೆ ಇದುವರೆಗೂ ಕೈಗೊಳ್ಳಲಾಗಿರುವ ಕ್ರಮಗಳ ಬಗ್ಗೆ ವಿವರಗಳನ್ನು ಒದಗಿಸುವಂತೆ ಮಾನ್ಯ ಸಮಾಜ ಕಲ್ಯಾಣ ಸಚಿವರಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

## ಉತ್ತರ

ಸರ್ಕಾರದ ಆದೇಶ ಸಂಖ್ಯೆ: ಸಕಇ 338 ಪಕವಿ 2018, ದಿನಾಂಕ:25-03-2019ರಲ್ಲಿ ಭವನಗಳ ನಿರ್ಮಾಣ ಕಾರ್ಯಕ್ರಮದ ಅನುಷ್ಠಾನ ಸಂಬಂಧವಾಗಿ ರಚಿಸಲಾಗಿರುವ ಮಾರ್ಗಸೂಚಿಗಳನ್ವಯ ಡಾ.ಬಿ.ಆರ್.ಅಂಬೇಡ್ಕರ್/ ಡಾ.ಬಾಬು ಜಗಜೀವನ ರಾಮ್ ಸಮುದಾಯ ಭವನಗಳನ್ನು ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಸದರಿ ಕಾರ್ಯಕ್ರಮದ ಅನುಷ್ಠಾನಕ್ಕಾಗಿ 2023-24 ಮತ್ತು 2024-25ನೇ ಸಾಲಿನಲ್ಲಿ ನಿಗಧಿಪಡಿಸಿದ ಹಾಗೂ ವೆಚ್ಚ ಮಾಡಿದ ಅನುದಾನದ ವಿವರ ಈ ಕೆಳಕಂಡಂತಿದೆ.

(ರೂ.ಲಕ್ಷಗಳಲ್ಲಿ)

| ವರ್ಷ | ನಿಗಧಿ | ವೆಚ್ಚ |
|---|---|---|
| 2023-24 | 90.00 | 90.00 |
| 2024-25 (ಇದುವರೆವಿಗೂ) | 110.00 | 55.00 |

ಮಾನ್ಯ ಭಾರೀ ಕೈಗಾರಿಕೆಗಳು ಮತ್ತು ಉಕ್ಕು ಸಚಿವರು, ಭಾರತ ಸರ್ಕಾರ, ನವದೆಹಲಿ ಇವರ ಪತ್ರ ದಿನಾಂಕ:03-10-2024 ರಲ್ಲಿ ಮಂಡ್ಯ ನಗರದಲ್ಲಿ ನಿರ್ಮಿಸಲಾಗಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನದ ದುರಸ್ತಿ ಹಾಗೂ ಇನ್ನಿತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ರೂ.3.00 ಕೋಟಿಗಳನ್ನು ಮಂಜೂರು ಮಾಡುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಿರುತ್ತಾರೆ. ಸದರಿ ಮನವಿಯನ್ವಯ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ ರವರಿಂದ ವರದಿ ಪಡೆದು, ಮಾರ್ಗಸೂಚಿಯನ್ವಯ ಪರಿಶೀಲಿಸಿ, ಸಂಪೂರ್ಣ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರಿಗೆ ತಿಳಿಸಲಾಗಿದೆ. ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ ರವರಿಂದ ವರದಿ ಸ್ವೀಕೃತಗೊಂಡ ನಂತರ ಪರಿಶೀಲಿಸಿ ಮುಂದಿನ ಕ್ರಮವಹಿಸಲಾಗುವುದು.

**ಸಂಖ್ಯೆ: SWD/942/PKV/2024**

**(ಡಾ||ಹೆಚ್.ಸಿ.ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು.